# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 895 |
| ಮಾನ್ಯ ಸದಸ್ಯರ ಹೆಸರು | ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 14.03.2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 2 ವರ್ಷದಲ್ಲಿ ಪಿಹೆಚ್‌ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡುವ ಮಾಸಿಕ ವ್ಯಾಸಂಗ ವೇತನ / ಫೆಲೋಶಿಪ್‌ಗೆ ಎಷ್ಟು ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ; (ಮಾಹಿತಿ ನೀಡುವುದು) | ಪಿಹೆಚ್‌ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡುವ ಮಾಸಿಕ ವ್ಯಾಸಂಗ ವೇತನ / ಫೆಲೋಶಿಪ್‌ಗೆ ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 2 ವರ್ಷದಲ್ಲಿ ಯಾವುದೇ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿರುವುದಿಲ್ಲ ಮತ್ತು ಆಯ್ಕೆಯಾಗಿರುವುದಿಲ್ಲ. |
| ಆ) | ಸದರಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಸರ್ಕಾರದ ಮಾನದಂಡಗಳು ಏನು; (ವಿವರ ನೀಡುವುದು) | ಪೂರ್ಣಾವಧಿ ಪಿಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳನ್ನೊಳಗೊಂಡ ಆದೇಶಗಳ ಪ್ರತಿಯನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಇ) | ಇಲ್ಲಿಯವರೆಗೆ ಈ ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ / ಫೆಲೋಶಿಪ್ ಬ್ಯಾಂಕಿಗೆ ಜಮೆ ಮಾಡಲಾಗಿದೆ; ಮತ್ತು ಬ್ಯಾಂಕಿಗೆ ಜಮೆಯಾಗದೇ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ಮಾಹಿತಿ ನೀಡುವುದು) | ಪಿಹೆಚ್‌ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡುವ ಮಾಸಿಕ ವ್ಯಾಸಂಗ ವೇತನ / ಫೆಲೋಶಿಪ್‌ಗೆ ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 2 ವರ್ಷದಲ್ಲಿ ಯಾವುದೇ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿರುವುದಿಲ್ಲ ಮತ್ತು ಆಯ್ಕೆಯಾಗಿರುವುದಿಲ್ಲ. |

ಸಂಖ್ಯೆ: ಹಿಂವಕ 332 ಬಿಎಂಎಸ್ 2025

(ಶಿವರಾಜ.ಎಸ್.ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

ಅನುಬಂಧ-1

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಪಿಎಚ್.ಡಿ. ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ ಫೆಲೋಶಿಪ್ ನೀಡುವ ಕುರಿತು.

ಓದಲಾಗಿದೆ: 1. 2015-16ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯ ಕಂಡಿಕೆ ಸಂಖ್ಯೆ (215).

2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ ತರಬೇತಿ/ಪ.ಪೂ.ತ/CR-4/2015-16, ದಿನಾಂಕ: 20.04.2015.

********

**ಪ್ರಸ್ತಾವನೆ:**

2015-16ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮಂಡಿಸಿದ ಆಯವ್ಯಯ ಭಾಷಣದ ಕಂಡಿಕೆ (215) ರಲ್ಲಿ ಈ ಕೆಳಗಿನಂತೆ ಘೋಷಿಸಲಾಗಿದೆ.

"ಪಿಎಚ್.ಡಿ ಪೂರ್ಣಾವಧಿ. (Full time) ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ 1000 ವಿದ್ಯಾರ್ಥಿಗಳಿಗೆ ಮಾಸಿಕ 5000/- ರೂ.ಗಳಂತೆ ವ್ಯಾಸಂಗ ವೇತನ / ಫೆಲೋಶಿಪ್ ನೀಡಲಾಗುವುದು. ಇದಕ್ಕಾಗಿ 5 ಕೋಟಿ ರೂ. ಅನುದಾನ ಒದಗಿಸಲಾಗುವುದು."

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು, ಆಯವ್ಯಯ ಘೋಷಣೆಯನ್ವಯ 2015-16ನೇ ಸಾಲಿನಿಂದ ಪೂರ್ಣಾವಧಿ ಪಿಎಚ್.ಡಿ. ಅಧ್ಯಯನದಲ್ಲಿ ತೊಡಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಮಾಸಿಕ ರೂ.5,000/-(ರೂ. ಐದು ಸಾವಿರ ಮಾತ್ರ) ದಂತೆ ವ್ಯಾಸಂಗ ವೇತನ / ಫೆಲೋಶಿಪ್ ಅನ್ನು ನೀಡುವ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ಸರ್ಕಾರದ ಆದೇಶದೊಂದಿಗೆ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 495 ಬಿಎಂಎಸ್ 2015, ದಿನಾಂಕ:11.06.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2015-16ನೇ ಸಾಲಿನಿಂದ ಪಿಎಚ್.ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ 1,000 ವಿದ್ಯಾರ್ಥಿಗಳಿಗೆ ಮಾಸಿಕ ರೂ.5,000/-(ರೂ. ಐದು ಸಾವಿರ ಮಾತ್ರ)ದಂತೆ ವ್ಯಾಸಂಗ ವೇತನ/ಫೆಲೋಶಿಪ್ ಅನ್ನು ಅನುಬಂಧದಲ್ಲಿನ ಮಾರ್ಗಸೂಚಿಗಳನ್ವಯ ಮಂಜೂರು ಮಾಡಿ ಆದೇಶಿಸಿದೆ.

ಈ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು 2015-16ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯವಲಯ ಯೋಜನೆ. ಲೆಕ್ಕಶೀರ್ಷಿಕೆ 2225-03-277-2-37 ರಡಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 531 ವೆಚ್ಚ-3/2015 ದಿನಾಂಕ:10.06.2015ರಲ್ಲಿ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

......2

2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು.
7. ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with OKEN Scanner

# ಪಿಎಚ್.ಡಿ. ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಕಾರ್ಯಕ್ರಮದ ಮಾರ್ಗಸೂಚಿಗಳು

(ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ.)

## I. ಯೋಜನೆಯ ಉದ್ದೇಶ:-

1. ಪೂರ್ಣಾವಧಿ ಪಿಎಚ್.ಡಿ. ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಡಿ.ದೇವರಾಜ ಅರಸುರವರ ಜನ್ಮ ಶತಮಾನೋತ್ಸವದ ಅಂಗವಾಗಿ 2015-16ನೇ ಸಾಲಿನಿಂದ ಮಾಸಿಕ ರೂ.5,000/- ದಂತೆ ವ್ಯಾಸಂಗ ವೇತನ/ಫೆಲೋಶಿಪ್ ಅನ್ನು ನೀಡಿ, ಉನ್ನತ ಶಿಕ್ಷಣ/ಸಂಶೋಧನೆಯಲ್ಲಿ ತೊಡಗಿಕೊಳ್ಳಲು ನೆರವಾಗುವುದು.
2. ಮಾನವಿಕ ವಿಷಯಗಳು, ಭಾಷೆ, ಸಮಾಜ ವಿಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೃಷಿ ಮತ್ತು ಸಂಬಂಧಿತ ವಿಜ್ಞಾನಗಳು,. ವಾಣಿಜ್ಯ ಮತ್ತು ನಿರ್ವಹಣೆ, ತಾಂತ್ರಿಕ ಹಾಗೂ ವೈದ್ಯಕೀಯ ವಿಜ್ಞಾನಗಳಲ್ಲಿ ಪಿಎಚ್.ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮಾಸಿಕ ರೂ.5,000/- ದಂತೆ ವ್ಯಾಸಂಗ ವೇತನ/ಫೆಲೋಶಿಪ್ ಅನ್ನು ನೀಡುವುದು.

## II. ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ ಮೊತ್ತ ಮತ್ತು ಅವಧಿ:-

- ಈ ಯೋಜನೆಯಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಪ್ರತಿ ತಿಂಗಳಿಗೆ ರೂ.5,000/- ದಂತೆ ಗರಿಷ್ಠ 3 ವರ್ಷಗಳ ಅವಧಿ ಅಥವಾ ಕೋರ್ಸ್ ಮುಕ್ತಾಯದ ಅವಧಿಯಲ್ಲಿ ಯಾವುದು ಮೊದಲೋ ಆ ಅವಧಿಗೆ ವ್ಯಾಸಂಗ ವೇತನ/ಫೆಲೋಶಿಪ್ ಅನ್ನು ಅಭ್ಯರ್ಥಿಯ ಬ್ಯಾಂಕ್ ಖಾತೆಗೆ ಜಮಾ ಮಾಡುವುದು.
- ವ್ಯಾಸಂಗ ವೇತನ/ಫೆಲೋಶಿಪ್ ಅನ್ನು ಮೂರು ವರ್ಷಗಳಿಗಿಂತ ಹೆಚ್ಚಿನ ಅವಧಿಗೆ ಒದಗಿಸತಕ್ಕದ್ದಲ್ಲ.

## III. ಅಭ್ಯರ್ಥಿಗೆ ನಿಗದಿಪಡಿಸಿರುವ ಅರ್ಹತೆಗಳು:-

1. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
2. ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿರಬೇಕು.
3. ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪೂರ್ಣಾವಧಿ (Full Time) ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.
4. ಈ ಸೌಲಭ್ಯವನ್ನು ಪಡೆಯಲಿಚ್ಚಿಸುವ ಅಭ್ಯರ್ಥಿಯು ಭಾರತ ಸರ್ಕಾರ / ಕರ್ನಾಟಕ ಸರ್ಕಾರ / ವಿಶ್ವವಿದ್ಯಾಲಯ ಅಥವಾ ಇತರೆ ಯಾವುದೇ ಸಂಸ್ಥೆಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗೆ ಆಯ್ಕೆಯಾಗಿರಬಾರದು.
5. ಶೈಕ್ಷಣಿಕ ಅರ್ಹತೆ:
   - ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರಬೇಕು.
   - ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಗಳಲ್ಲಿನ ಸಂಶೋಧನಾ ಮಾರ್ಗದರ್ಶಕರಡಿಯಲ್ಲಿ ಪಿಎಚ್.ಡಿ ಅಧ್ಯಯನಕ್ಕಾಗಿ ನೋಂದಣಿ ಮಾಡಿಕೊಂಡಿರಬೇಕು.
   - ಈ ನೋಂದಣಿಯು ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಹಿಂದಿನ 2 ವರ್ಷಗಳೊಳಗಿದ್ದು, ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.
6. ವಯೋಮಿತಿ:
   - ಅಭ್ಯರ್ಥಿಯ ಗರಿಷ್ಠ ವಯೋಮಿತಿ 35 ವರ್ಷಗಳು.
7. ಕುಟುಂಬದ ಒಟ್ಟು ವಾರ್ಷಿಕ ಆದಾಯಮಿತಿ:
   - ಪ್ರವರ್ಗ-1 - ರೂ.4.50 ಲಕ್ಷ.
   - ಪ್ರವರ್ಗ-2(ಎ), 3(ಎ) ಮತ್ತು 3(ಬಿ) - ರೂ.3.50 ಲಕ್ಷ.

.....2

8. ಕೇಂದ್ರ / ರಾಜ್ಯ ಸರ್ಕಾರಿ / ಅನುದಾನಿತ ಸಂಸ್ಥೆ / ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳ ಉದ್ಯೋಗಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಲ್ಲ.
9. ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.
10. ಒಬ್ಬ ಅಭ್ಯರ್ಥಿಗೆ ಒಂದು ಬಾರಿ ಮಾತ್ರ ಪಿಎಚ್.ಡಿ ಅಧ್ಯಯನಕ್ಕಾಗಿ ಈ ಸೌಲಭ್ಯವನ್ನು ಒದಗಿಸುವುದು.

IV. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ:

1. ಈ ಯೋಜನೆಯಡಿ ಸೌಲಭ್ಯವನ್ನು ಪಡೆಯಲು ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ಆನ್-ಲೈನ್ ಮೂಲಕ ಸೂಕ್ತ ದಾಖಲೆಗಳೊಂದಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಅರ್ಜಿಯನ್ನು ಸಲ್ಲಿಸುವುದು.
2. ಆನ್-ಲೈನ್ ಅರ್ಜಿಯೊಂದಿಗೆ ಸ್ಕ್ಯಾನ್ ಮಾಡಿ ಸಲ್ಲಿಸಬೇಕಾದ ದಾಖಲೆಗಳು.
   - ಎಸ್.ಎಸ್.ಎಲ್.ಸಿ. ಅಂಕಪಟ್ಟಿ
   - ಜಾತಿ ಮತ್ತು ಆದಾಯ ಪ್ರಮಾಣ ಪತ್ರ,
   - ವಾಸಸ್ಥಳ ಪ್ರಮಾಣ ಪತ್ರ,
   - ಸ್ನಾತಕೋತ್ತರ ಪದವಿಯ ಅಂಕಪಟ್ಟಿಗಳು
   - ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ (Convocation Certificate).
   - ಪಿಎಚ್.ಡಿ. ಅಧ್ಯಯನಕ್ಕಾಗಿ ನೋಂದಣಿ ಮಾಡಿರುವ ಬಗ್ಗೆ ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಯಿಂದ ಪ್ರಮಾಣ ಪತ್ರ,
   - ಇತರೆ ಯಾವುದೇ ಮೂಲಗಳಿಂದ ವ್ಯಾಸಂಗ ವೇತನಕ್ಕೆ ಆಯ್ಕೆಯಾಗದಿರುವ ಬಗ್ಗೆ ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಯಿಂದ ದೃಢೀಕರಣ.
3. ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಅಭ್ಯರ್ಥಿಯ ಹೆಸರಿನಲ್ಲಿ ಉಳಿತಾಯ ಖಾತೆಯನ್ನು ತೆರೆದು, ವಿವರವನ್ನು ಅರ್ಜಿಯಲ್ಲಿ ನಮೂದಿಸಬೇಕು.

V. ಅನುದಾನ ಹಂಚಿಕೆ ವಿಧಾನ:

1. ಅನುದಾನ ಲಭ್ಯತೆ, ಮೆರಿಟ್ ಹಾಗೂ ಮೀಸಲಾತಿಯನ್ವಯ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗೆ ಅಭ್ಯರ್ಥಿಗಳನ್ನು ಪರಿಗಣಿಸಿ ಜಿಲ್ಲಾವಾರು ಅನುದಾನ ಹಂಚಿಕೆ ಮಾಡುವುದು.

2. ಕೋರ್ಸ್‌ವಾರು ಹಂಚಿಕೆ ಮಾಡಬೇಕಾಗಿರುವ ಅನುದಾನದ ವಿವರ.

| ಕ್ರ. ಸಂ. | ವಿಷಯ | ಶೇಕಡವಾರು |
|---|---|---|
| 1 | ಮಾನವಿಕ ವಿಷಯಗಳು, ಭಾಷೆ, ಸಮಾಜ ವಿಜ್ಞಾನ | 30% |
| 2 | ವಿಜ್ಞಾನ ಮತ್ತು ತಂತ್ರಜ್ಞಾನ, ಕೃಷಿ ಮತ್ತು ಸಂಬಂಧಿತ ವಿಜ್ಞಾನ | 30% |
| 3 | ವಾಣಿಜ್ಯ ಮತ್ತು ನಿರ್ವಹಣೆ | 15% |
| 4 | ತಾಂತ್ರಿಕ ಹಾಗೂ ವೈದ್ಯಕೀಯ ವಿಜ್ಞಾನ | 25% |
| | ಒಟ್ಟು | 100% |

ಯಾವುದಾದರೂ ವಿಷಯಗಳಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಮೀಸಲಾತಿ ಹಾಗೂ ಬೇಡಿಕೆಯನ್ವಯ ಇತರೆ ವಿಷಯಗಳಿಗೆ ಅನುದಾನವನ್ನು ಮರು ಹಂಚಿಕೆ ಮಾಡುವುದು.

......3

Scanned with OKEN Scanner

3. ಪ್ರವರ್ಗವಾರು ಹಂಚಿಕೆ ಮಾಡಬೇಕಾಗಿರುವ ಅನುದಾನದ ವಿವರ.

| ಕ್ರ. ಸಂ. | ಪ್ರವರ್ಗ | ಶೇಕಡವಾರು |
|---|---|---|
| 1 | 1 | 24% |
| 2 | 2(ಎ) | 46% |
| 3 | 3(ಎ) | 14% |
| 4 | 3(ಬಿ) | 16% |
| | ಒಟ್ಟು | 100 |

ಯಾವುದಾದರೂ ಪ್ರವರ್ಗದಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಮೀಸಲಾತಿ ಹಾಗೂ ಬೇಡಿಕೆಯನ್ವಯ ಇತರೆ ಪ್ರವರ್ಗಗಳಿಗೆ ಅನುದಾನವನ್ನು ಮರು ಹಂಚಿಕೆ ಮಾಡುವುದು.

VI. ಮಂಜೂರಾತಿ ವಿಧಾನ:

1. ಅಭ್ಯರ್ಥಿಯು ಆನ್-ಲೈನ್ ಮೂಲಕ ಸಲ್ಲಿಸುವ ಅರ್ಜಿಗಳ ಸ್ವೀಕೃತಿ ಪತ್ರ ಮತ್ತು ಅಪ್‌ಲೋಡ್ ಮಾಡಿರುವ ಎಲ್ಲಾ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಆಯಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು ಪಡೆದು, ಪರಿಶೀಲಿಸುವುದು.
2. ಮಾಹಿತಿಯ ಪರಿಶೀಲನೆಯ ಬಳಿಕ ಅರ್ಹತೆ ಮತ್ತು ಆದಾಯದ್ವನಯ (merit cum means) ಅರ್ಹ ಅಭ್ಯರ್ಥಿಗಳನ್ನು ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗೆ ಆಯ್ಕೆ ಮಾಡುವುದು.
3. ಪ್ರತಿ ತಿಂಗಳು ಅಭ್ಯರ್ಥಿಯ ಹಾಜರಾತಿಯ ವಿವರವನ್ನು ಸಂಬಂಧಿಸಿದ ವಿಶ್ವವಿದ್ಯಾಲಯ/ ಸಂಬಂಧಿಸಿದ ಸಂಸ್ಥೆಗಳಿಂದ ಪಡೆದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್ ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
4. ಅಭ್ಯರ್ಥಿಯು ಕನಿಷ್ಠ ಶೇ.75 ರಷ್ಟು ಹಾಜರಾತಿಯನ್ನು ಹೊಂದಿದ್ದಲ್ಲಿ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರಾತಿಗೆ ಪರಿಗಣಿಸುವುದು.
5. ಪ್ರತಿ ಮಾಹೆವಾರು ಹಾಜರಾತಿ ಮತ್ತು ಬಿಲ್‌ಗಳನ್ನು ಇಲಾಖೆಯ ವೆಬ್ ಪೋರ್ಟಲ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮೇಲುರುಜು ಪಡೆದುಕೊಳ್ಳುವುದು.
6. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಸದರಿ ಬಿಲ್ ಅನ್ನು ಅಭ್ಯರ್ಥಿಗಳ ಬ್ಯಾಂಕ್ ಖಾತೆ ಮತ್ತು IFSC ಕೋಡ್‌ನೊಂದಿಗೆ ಖಜಾನೆಗೆ ಸಲ್ಲಿಸಿ, ಅಭ್ಯರ್ಥಿಗಳ ಬ್ಯಾಂಕ್ ಖಾತೆಗೆ ಆನ್-ಲೈನ್ ಮೂಲಕ ಜಮಾ ಮಾಡಲು ಕ್ರಮ ಕೈಗೊಳ್ಳುವುದು.

VII. ಇತರೆ ಷರತ್ತುಗಳು:-

1. ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗೆ ಆಯ್ಕೆಗೊಂಡ ವಿದ್ಯಾರ್ಥಿಯು ಅದೇ ವಿಶ್ವ ವಿದ್ಯಾಲಯ/ಸಂಸ್ಥೆಯಲ್ಲಿ ವ್ಯಾಸಂಗವನ್ನು ಮಾಡತಕ್ಕದ್ದು ಹಾಗೂ ಅರ್ಜಿಯಲ್ಲಿ ನಮೂದಿಸಿರುವ ವ್ಯಾಸಂಗ ಮಾಡುವ ವಿಷಯವನ್ನು ಬದಲಾಯಿಸತಕ್ಕದ್ದಲ್ಲ.
2. ಪಿಎಚ್.ಡಿ. ಅಧ್ಯಯನದ ಪ್ರಗತಿಯ ಬಗ್ಗೆ ತನ್ನ ಸಂಶೋಧನಾ ಮಾರ್ಗದರ್ಶಕರಿಂದ ಅಭ್ಯರ್ಥಿಯು ಪ್ರತಿ 6 ತಿಂಗಳಿಗೊಮ್ಮೆ ವರದಿಯನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗೆ ಸಲ್ಲಿಸುವುದು.
3. ಈ ಪ್ರಗತಿ ವರದಿಯ ಆಧಾರದಲ್ಲಿ ನವೀಕರಣ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಸೌಲಭ್ಯವನ್ನು ಮುಂದುವರೆಸುವುದು.
4. ಯಾವುದೇ ಕಾರಣಕ್ಕೂ ವಿದ್ಯಾರ್ಥಿಯು ಪಿಎಚ್.ಡಿ ಅಧ್ಯಯನವನ್ನು ಅರ್ಧದಲ್ಲಿ ಮೊಟಕುಗೊಳಿಸಕೂಡದು. ಮೊಟಕುಗೊಳಿಸಿದಲ್ಲಿ ಅಂತಹ ಅಭ್ಯರ್ಥಿಗೆ ನೀಡಿದ ವ್ಯಾಸಂಗ ವೇತನ/ಫೆಲೋಶಿಪ್ ಮೊತ್ತವನ್ನು ವಸೂಲಿ ಮಾಡಲು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ನಿಯಮಾನುಸಾರ ಕ್ರಮ ಕೈಗೊಳ್ಳುವುದು.

.....4

5. ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಯು ನಿಗದಿಪಡಿಸುವ ಅವಧಿಯೊಳಗೆ ವಿದ್ಯಾರ್ಥಿಯು ಪಿಎಚ್.ಡಿ ಅಧ್ಯಯನವನ್ನು ಪೂರ್ಣಗೊಳಿಸಿ, ತನ್ನ Course Completion Report ಅನ್ನು ಸಂಶೋಧನಾ ಮಾರ್ಗದರ್ಶಕರು/ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಯಿಂದ ಪಡೆದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗೆ ಸಲ್ಲಿಸುವುದು.
6. ಈ ಮೇಲಿನ ಷರತ್ತುಗಳಿಗೆ ಬದ್ಧವಾಗಿರುವ ಬಗ್ಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರಾತಿಯ ಪೂರ್ವದಲ್ಲಿ ಅಭ್ಯರ್ಥಿಯಿಂದ ಮುಚ್ಚಳಿಕೆ ಪ್ರಮಾಣ ಪತ್ರವನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯು ಪಡೆಯುವುದು.

VIII. ತಪ್ಪು ಮಾಹಿತಿಗೆ ದಂಡ:

1. ಅಭ್ಯರ್ಥಿಯು ತಪ್ಪು ಮಾಹಿತಿ ನೀಡಿದಲ್ಲಿ, ಅಂತಹವರ ವಿರುದ್ಧ ನಿಯಮಾನುಸಾರ ಕ್ರಮ ತೆಗೆದುಕೊಳ್ಳುವುದು.
2. ಕಾನೂನಿನಂತೆ ಕ್ರಮ ಜರುಗಿಸುವುದರ ಜೊತೆಗೆ, ವಿದ್ಯಾರ್ಥಿಯು ಪಡೆದ ಒಟ್ಟು ಆರ್ಥಿಕ ಸಹಾಯವನ್ನು ಆ ಅಭ್ಯರ್ಥಿಯಿಂದ ಅಥವಾ ಅವರ ತಂದೆ-ತಾಯಿ/ಪೋಷಕರಿಂದ ಭೂ ಕಂದಾಯ ಬಾಕಿಯೆಂದು ಪರಿಗಣಿಸಿ ವಸೂಲಿ ಮಾಡುವುದು.
3. ಮಂಜೂರು ಮಾಡುವ ಅಧಿಕಾರಿಗಳು ಸಹ, ನಿಯಮಗಳ ವಿರುದ್ಧ ಮಂಜೂರು ಮಾಡಿ, ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದಲ್ಲಿ ಅಂತಹವರ ವಿರುದ್ಧ ಶಿಸ್ತಿನ ಕ್ರಮ ಜರುಗಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಹಾಗೂ ಈ ರೀತಿ ತಪ್ಪಾಗಿ ಪಾವತಿಯಾದ ಮೊತ್ತವನ್ನು ಅವರ ವೇತನದಿಂದ ವಸೂಲಿ ಮಾಡುವುದು.

IX. ಇತರೆ:

1. ಪ್ರವರ್ಗವಾರು ಜಾತಿಗಳ ಪಟ್ಟಿ, ಕುಟುಂಬದ ವಾರ್ಷಿಕ ವರಮಾನ, ಅರ್ಹತೆ ಇತ್ಯಾದಿಗಳು ಸರ್ಕಾರವು ಕಾಲ-ಕಾಲಕ್ಕೆ ಹೊರಡಿಸುವ ಆದೇಶಗಳನ್ವಯ ಪರಿಷ್ಕರಣೆಗೆ ಒಳಪಟ್ಟಿರುತ್ತದೆ.
2. ಈ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಅರ್ಜಿ ನಮೂನೆ, ಕಾರ್ಯವಿಧಾನ ಇತ್ಯಾದಿಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ನಿರ್ಧರಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು.
8. ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with OKEN Scann

ಕರ್ನಾಟಕ ಸರ್ಕಾರ

ಸಂ:ಬಿಸಿಡಬ್ಲ್ಯೂ 09 ಬಿಎಂಎಸ್ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 08.01.2016.

## ತಿದ್ದುಪಡಿ ಆದೇಶ

ಸರ್ಕಾರಿ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 495 ಬಿಎಂಎಸ್ 2015, ದಿನಾಂಕ: 11.06.2015ರ ಅನುಬಂಧದ ಮಾರ್ಗಸೂಚಿಗಳ

1. ಪುಟ ಸಂಖ್ಯೆ1ರಲ್ಲಿನ ಕಂಡಿಕೆ (3)ರ ಉಪಕಂಡಿಕೆ(5)ರಲ್ಲಿ ಪಿ.ಹೆಚ್.ಡಿ ಅಧ್ಯಯನಕ್ಕಾಗಿ ನೋಂದಣಿಯು ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಹಿಂದಿನ 2 ವರ್ಷಗಳೊಳಗಿದ್ದು, ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು ಎಂಬುದನ್ನು 'ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವ್ಯಾಸಂಗ ವೇತನ/ಫೆಲೋಶಿಪ್ ನೀಡುವುದು' ಎಂದು ತಿದ್ದಿ ಓದಿಕೊಳ್ಳತಕ್ಕದ್ದು.
2. ಪುಟ ಸಂಖ್ಯೆ2ರಲ್ಲಿನ ಕಂಡಿಕೆ (5)ರ ಉಪಕಂಡಿಕೆ (2)ರಲ್ಲಿ ನಿಗದಿಪಡಿಸಲಾಗಿರುವ ಈ ಕೆಳಕಂಡ ವಿಷಯವಾರು ಮೀಸಲಾತಿಯನ್ನು ರದ್ದುಪಡಿಸಲಾಗಿದೆ ಎಂದು ಓದಿಕೊಳ್ಳತಕ್ಕದ್ದು.

| ಕ್ರ. ಸಂ. | ವಿಷಯ | ಶೇಕಡವಾರು |
|---|---|---|
| 1 | ಮಾನವಿಕ ವಿಷಯಗಳು, ಭಾಷೆ, ಸಮಾಜ ವಿಜ್ಞಾನ | 30% |
| 2 | ವಿಜ್ಞಾನ ಮತ್ತು ತಂತ್ರಜ್ಞಾನ, ಕೃಷಿ ಮತ್ತು ಸಂಬಂಧಿತ ವಿಜ್ಞಾನ | 30% |
| 3 | ವಾಣಿಜ್ಯ ಮತ್ತು ನಿರ್ವಹಣೆ | 15% |
| 4 | ತಾಂತ್ರಿಕ ಹಾಗೂ ವೈದ್ಯಕೀಯ ವಿಜ್ಞಾನ | 25% |
| | ಒಟ್ಟು | 100% |

3. ಪ್ರವರ್ಗವಾರು ಮೀಸಲಾತಿಯಲ್ಲಿ other OBC ಗೆ 1% ಮೀಸಲಾತಿಯನ್ನು ನಿಗದಿಪಡಿಸುವುದು. ಎಂಬುದನ್ನು ಈ ಕೆಳಗಿನಂತೆ ಮರು ನಿಗಧಿಪಡಿಸಿದ್ದು, ಅದರಂತೆ ಓದಿಕೊಳ್ಳತಕ್ಕದ್ದು.

| ಕ್ರ. ಸಂ. | ಪ್ರವರ್ಗ | ಶೇಕಡವಾರು |
|---|---|---|
| 1 | I | 23% |
| 2 | 2(ಎ) | 46% |
| 3 | 3(ಎ) | 14% |
| 4 | 3(ಬಿ) | 16% |
| 5 | other OBC | 1% |
| | ಒಟ್ಟು | 100 |

....2

Scanned with OKEN Scanner

Scanned with OKEN Scanner

ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಾಗೂ ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಅರ್ಹ ವಿದ್ಯಾರ್ಥಿಗಳಿಗೆ ಅನುದಾನ ಲಭ್ಯತೆ, ಮೆರಿಟ್ ಹಾಗೂ ಪ್ರವರ್ಗವಾರು ಮೀಸಲಾತಿಯನ್ವಯ ವ್ಯಾಸಂಗ ವೇತನ/ಫೆಲೋಶಿಪ್ ಪಡೆಯಲು ಅರ್ಹರು ಎಂಬುದಾಗಿ ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಂತರಿಕ, ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ. ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿಗಳು, ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

Scanned with OKEN Scanne

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2018-19ನೇ ಸಾಲಿನಿಂದ ಪೂರ್ಣಾವಧಿ ಪಿ.ಎಚ್.ಡಿ ಅಧ್ಯಯನದಲ್ಲಿ ತೊಡಗುವ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ರೂ.5000/- ದಿಂದ ರೂ.10.000/- ಗಳಿಗೆ ಹೆಚ್ಚಿಸುವ ಕುರಿತು.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 495 ಬಿಎಂಎಸ್ 2015, ದಿನಾಂಕ:11.06.2015.

2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ತ-2/ಪಿಎಚ್‌ಡಿ/ಸಿ.ಆರ್-1/2018-19, ದಿನಾಂಕ: 07.04.2018.

ಆಯುಕ್ತರ ಕಛೇರಿ ಹಿಂದುಳಿದ ವರ್ಗಗಳ ಇಲಾಖೆ ಸಂಖ್ಯೆ: ........ ದಿ: 23/08

******

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮಸಂಖ್ಯೆ:(1)ರ ಆದೇಶಲ್ಲಿ 2015-16ನೇ ಸಾಲಿನಿಂದ ಪಿಎಚ್‌ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ 1000 ವಿದ್ಯಾರ್ಥಿಗಳಿಗೆ ಮಾಸಿಕ ರೂ.5000/-ದಂತೆ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ನೀಡಲು ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ:(2)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆ ದಿನಾಂಕ:07.04.2018ರಲ್ಲಿ 2018-19ನೇ ಸಾಲಿಗೆ ಆಯವ್ಯಯ ಭಾಷಣದಲ್ಲಿ ಕಂಡಿಕೆ:198ರಲ್ಲಿ ಘೋಷಿಸಿರುವಂತೆ ಪೂರ್ಣಾವಧಿ ಪಿಎಚ್‌ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ರೂ.5000/-ಗಳಿಂದ ರೂ.10,000/-ಗಳಿಗೆ ಹೆಚ್ಚಿಸಲಾಗುವುದು ಎಂದು ಘೋಷಿಸಿರುವಂತೆ 2018-19ನೇ ಸಾಲಿನ ಆಯವ್ಯಯದಲ್ಲಿ ರಾಜ್ಯವಲಯ ಲೆಕ್ಕಶೀರ್ಷಿಕೆ:2225-03-277-2-37ರಡಿ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಕಾರ್ಯಕ್ರಮಕ್ಕಾಗಿ ರೂ.5,500.00 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ. ಪೂರ್ಣಾವಧಿ ಪಿಎಚ್‌ಡಿ ಅಧ್ಯಯನದಲ್ಲಿ ತೊಡಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅರ್ಹ ಹೊಸ ವಿದ್ಯಾರ್ಥಿಗಳು ಹಾಗೂ ನವೀಕರಣ ವಿದ್ಯಾರ್ಥಿಗಳಿಗೆ 2018-19ನೇ ಸಾಲಿನಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ರೂ.5000/-ಗಳಿಂದ ರೂ.10,000/-ಗಳಿಗೆ ಹೆಚ್ಚಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 704 ಬಿಎಂಎಸ್ 2018, ಬೆಂಗಳೂರು**
**ದಿನಾಂಕ:18-08-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018-19ನೇ ಸಾಲಿನಿಂದ ಪೂರ್ಣಾವಧಿ ಪಿ.ಎಚ್.ಡಿ ಅಧ್ಯಯನದಲ್ಲಿ ತೊಡಗುವ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ರೂ.5000/- ದಿಂದ ರೂ.10.000/-ಗಳಿಗೆ ಹೆಚ್ಚಿಸಿ ಅನುಮೋದನೆ ನೀಡಿ ಆದೇಶಿಸಿದೆ.

2018-19ನೇ ಸಾಲಿನಲ್ಲಿ ಈ ಪ್ರಸ್ತಾವನೆಗೆ ಸಂಬಂಧಿಸಿದಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಚಾಲ್ತಿಯಲ್ಲಿರುವ Delegation of Financial Powers ರಂತೆ ಕ್ರಮವಹಿಸುವ ಹಾಗೂ ಪ್ರಸಕ್ತ ಸಾಲಿಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಮತ್ತು ಹಾಲಿ ಇರುವ ಮಾರ್ಗಸೂಚಿಯನ್ವಯ, ನಿಯಮಾನುಸಾರ ಹಾಗೂ ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟಿದೆ.

...2

Scanned with OKEN Scanner

Scanned with OKEN Scanner

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 463 ವೆಚ್ಚ-3/2018 ದಿನಾಂಕ:14.08.2018 ರಲ್ಲಿ ನೀಡಿರುವ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 23 ಐಎಂಎಂ 2018, ದಿನಾಂಕ:07.05.2018ರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3) ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4) ಎಲ್ಲಾ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9), ವಿಧಾನಸೌಧ.
9) ನಿರ್ದೇಶಕರು, ಪಿ.ಎಂ.ಐ ವಿಭಾಗ, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ.

(4-6: ಆಯುಕ್ತರು, ಹಿಂವಕ, ಇವರ ಮುಖಾಂತರ)

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
2) ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
4) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

*****

Scanned with OKEN Scanner
Scanned with OKEN Scanne

ಕರ್ನಾಟಕ ಸರ್ಕಾರ

ಸಂ:ಹಿಂವಕ 704 ಬಿಎಂಎಸ್ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 26-10-2018.

26/X/18

## ತಿದ್ದುಪಡಿ ಆದೇಶ

ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 09 ಬಿಎಂಎಸ್ 2016, ದಿನಾಂಕ:08.01.2016ರ ಕಂಡಿಕೆ:01ರಲ್ಲಿ "ಪೂರ್ಣಾವಧಿ ಪಿಹೆಚ್‌ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವ್ಯಾಸಂಗ ವೇತನ/ಫೆಲೋಶಿಪ್ ನೀಡುವುದು" ಎಂಬುದನ್ನು "ವಿದ್ಯಾರ್ಥಿಗಳು ಪೂರ್ಣಾವಧಿ ಪಿಹೆಚ್‌ಡಿ ಅಧ್ಯಯನಕ್ಕಾಗಿ ಮಾಡಿಸುವ ನೋಂದಣಿ ದಿನಾಂಕವು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸುವ ಕೊನೆಯ ದಿನಾಂಕಕ್ಕೆ ಹಿಂದಿನ 2 ವರ್ಷದೊಳಗಿದ್ದು, ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿಹೆಚ್‌ಡಿ ಅಧ್ಯಯನದಲ್ಲಿ ತೊಡಗಿರಬೇಕು" ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕಪರಿಶೋಧನೆ-I ಮತ್ತು 2), ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3) ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4) ಎಲ್ಲಾ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು.

(4–6: ಆಯುಕ್ತರು, ಹಿಂವಕ, ಇವರ ಮುಖಾಂತರ)

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
2) ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು,
4) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

Scanned with OKEN Scanner